# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 18.06.2011**

***ರಾಜರಾಜೇಶ್ವರಿನಗರ ವಲಯ ವ್ಯಾಪ್ತಿಯಲ್ಲಿನ ವಾರ್ಡ್‌ಗಳಲ್ಲಿ ಪೂಜ್ಯ ಮಹಾಪೌರರ ತಪಾಸಣೆ***

ಇಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಪೂಜ್ಯ ಮಹಾಪೌರರಾದ ಶ್ರೀಮತಿ ಶಾರದಮ್ಮ ರವರು ಉಪ ಮಹಾಪೌರರಾದ ಶ್ರೀ ಎಸ್. ಹರೀಶ್ ಹಾಗೂ ಆಯುಕ್ತರಾದ ಶ್ರೀ ಸಿದ್ದಯ್ಯ ರವರೊಂದಿಗೆ ರಾಜರಾಜೇಶ್ವರಿನಗರ ವಲಯ ವ್ಯಾಪ್ತಿಯ ಹೆಚ್.ಎಂ.ಟಿ, ಲಕ್ಷ್ಮಿದೇವಿನಗರ, ಲಗ್ಗೆರೆ ವಾರ್ಡ್‌ಗಳಲ್ಲಿ ತಪಾಸಣೆಯನ್ನು ಕೈಗೊಂಡು ಪರಿಶೀಲಿಸಿದರು.

ವಾರ್ಡ್-69, ಲಗ್ಗೆರೆಯಲ್ಲಿ ರಾಕ್ಷಸಿ ಹಳ್ಳ ಎಂದು ಕರೆಯಲ್ಪಡುವ ದೊಡ್ಡದಾದ ರಾಜಕಾಲುವೆ (SWD)ಯ ಸುಮಾರು 10 ಎಕರೆಯ ಸರ್ಕಾರಿ ಜಾಗವನ್ನು ಸ್ಥಳೀಯ ನಿವಾಸಿಗಳು ಒತ್ತುವರಿ ಮಾಡಿರುತ್ತಾರೆ ಎಂದು ಸ್ಥಳೀಯ ಪಾಲಿಕೆ ಸದಸ್ಯ ಶ್ರೀ ಲಕ್ಷ್ಮೀಕಾಂತ ರೆಡ್ಡಿ ರವರು ತಿಳಿಸಿರುತ್ತಾರೆ. ಅದಕ್ಕೆ ಪ್ರತಿಕ್ರಿಯಿಸಿದ ಪೂಜ್ಯ ಮಹಾಪೌರರು ಹಾಗೂ ಆಯುಕ್ತರು ಕೂಡಲೇ ಒಂದು ವಾರದಲ್ಲಿ ಸದರಿ ಕಾಲುವೆಯ ಒತ್ತುವರಿಯನ್ನು ತೆರವುಗೊಳಿಸಿ, ಬೇಲಿಯನ್ನು ನಿರ್ಮಿಸಲು ಕ್ರಮ ಕೈಗೊಳ್ಳಬೇಕೆಂದು ಜಂಟಿ ಆಯುಕ್ತರಾದ ಶ್ರೀ ರಾಮಚಂದ್ರರವರಿಗೆ ಆದೇಶ ನೀಡಿದರು. ಹಾಗೂ ಸ್ಥಳೀಯ ಪಾಲಿಕೆ ಸದಸ್ಯರ ಮತ್ತು ಸಾರ್ವಜನಿಕರ ಕೋರಿಕೆಯ ಮೇರೆಗೆ ತೆರವುಗೊಳಿಸಿದ ಜಾಗದಲ್ಲಿ ಉತ್ತಮವಾದ ಉದ್ಯಾನವನ್ನು ನಿರ್ಮಿಸಿ ಕೊಡಲಾಗುವುದೆಂದು ಆಯುಕ್ತರು ತಿಳಿಸಿದರು.

ನಂತರ ವಾರ್ಡ್-42, ಲಕ್ಷ್ಮಿದೇವಿನಗರ ವಾರ್ಡ್‌ಗೆ ಭೇಟಿ ನೀಡಿ, ಸ್ಥಳೀಯ ರಸ್ತೆಗಳ ಗುಣಮಟ್ಟವನ್ನು ಹಾಗೂ ರಸ್ತೆ ಬದಿಯ ಮೋರಿಗಳನ್ನು ಪರಿಶೀಲಿಸಿ, ಕೂಡಲೇ ಅಭಿವೃದ್ಧಿ ಪಡಿಸಲು ಸಂಬಂಧಪಟ್ಟ ಅಭಿಯಂತರರಿಗೆ ಆಯುಕ್ತರು ಸೂಚನೆ ನೀಡಿದರು.

ಅಲ್ಲದೇ ಸ್ಥಳೀಯ ನಿವಾಸಿಗಳ ಬಹುದಿನಗಳ ಬೇಡಿಕೆಗಳನ್ನು ಆಲಿಸಿದ ಪೂಜ್ಯ ಮಹಾಪೌರರು, ಪಾಲಿಕೆಯ ನಂದಿನಿ ಲೇಔಟ್ ಆರೋಗ್ಯ ಕೇಂದ್ರ ಮತ್ತು ಹೆರಿಗೆ ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲಿಸಿದ ಸಂದರ್ಭದಲ್ಲಿ ವೈದ್ಯರು ಸ್ಥಳದಲ್ಲಿ ಹಾಜರಿರುವುದಿಲ್ಲ. ಆಸ್ಪತ್ರೆಯ ಸಿಬ್ಬಂದಿಗಳು ಹೆರಿಗೆಗಾಗಿ ಬಂದ ಬಾಣಂತಿಯರನ್ನು ಸೂಕ್ತ ಚಿಕಿತ್ಸೆ ನೀಡದೇ ಬೇರೆ ಆಸ್ಪತ್ರೆಗಳಿಗೆ ಹೋಗಲು ಸೂಚನೆ ನೀಡುತ್ತಾರೆ ಎಂದು ಸ್ಥಳಿಯ ಮಹಿಳೆಯರು ತಿಳಿಸಿದರು. ಈ ವಿಷಯವನ್ನು ಗಂಭೀರವಾಗಿ ತೆಗೆದುಕೊಂಡ ಆಯುಕ್ತರು ಆಸ್ಪತ್ರೆಯ ಸಿಬ್ಬಂದಿಗಳು ಇನ್ನು ಮುಂದೆ ಗರ್ಭಿಣಿ ಮಹಿಳೆಯರಿಗೆ ಬೇರೆ ಕಡೆ ಕಳುಹಿಸದೇ ಈ ಆಸ್ಪತ್ರೆಯಲ್ಲೇ ಚಿಕಿತ್ಸೆ ನೀಡಿ ಉತ್ತಮ ಗುಣಮಟ್ಟದ ಔಷಧಿಗಳನ್ನು ನೀಡಬೇಕು ಎಂದು ಕಟ್ಟುನಿಟ್ಟಾಗಿ ಆದೇಶ ನೀಡಿದರು.

ಅತಿ ಹೆಚ್ಚು ಮಳೆಯಾದಾಗ ಆಸ್ಪತ್ರೆ ಕಟ್ಟಡವು ಸೋರುತ್ತಿರುವುದರಿಂದ ಅದನ್ನು ಸರಿಪಡಿಸಬೇಕೆಂದು ಸ್ಥಳೀಯರು ಕೋರಿರುವುದರಿಂದ ಕೂಡಲೇ ಕಟ್ಟಡವನ್ನು ದುರಸ್ಥಿಪಡಿಸಲು ಹಾಗೂ ಆಸ್ಪತ್ರೆಯ ಮುಂಭಾಗದಲ್ಲಿ ಒಣಗಿ ಹೋದ ಮರವನ್ನು ತೆಗೆಸಲು ಮುಖ್ಯ ಅಭಿಯಂತರರಾದ ಶ್ರೀ ಶ್ರೀನಿವಾಸ ಮೂರ್ತಿಯವರಿಗೆ ಆಯುಕ್ತರು ಸೂಚಿಸಿದರು.

ತದನಂತರ ವಾರ್ಡ್-38, ಹೆಚ್.ಎಂ.ಟಿ. ವಾರ್ಡ್‌ಗೆ ಭೇಟಿ ನೀಡಿದ ಸಂದರ್ಭದಲ್ಲಿ ಸ್ಥಳೀಯ ಪಾಲಿಕೆ ಸದಸ್ಯರಾದ ಶ್ರೀಮತಿ ಆಶಾ ಸುರೇಶ್ ರವರು ತಮ್ಮ ವಾರ್ಡ್‌ನಲ್ಲಿ ಆಸ್ಪತ್ರೆ ಹಾಗೂ ಅಂಬೇಡ್ಕರ್ ಸಮುದಾಯ ಭವನದ ಅವಶ್ಯಕತೆ ಇರುವುದರಿಂದ, ಪ್ರಸ್ತುತ ವಾರ್ಡ್‌ನಲ್ಲಿರುವ ಉದ್ಯಾನವನದ ಸ್ಥಳವನ್ನು ಅಂಬೇಡ್ಕರ್ ಸಮುದಾಯ ಭವನವನ್ನಾಗಿ ನಿರ್ಮಿಸಿ, ಸ್ಥಳೀಯ ನಿವಾಸಿಗಳಿಗೆ ಕಾರ್ಯಕ್ರಮಗಳನ್ನು ನಡೆಸಲು ಅನುವು ಮಾಡಿಕೊಡಬೇಕೆಂದು ಹಾಗೂ ಉತ್ತಮವಾದ ಆಸ್ಪತ್ರೆಯನ್ನು ನಿರ್ಮಿಸಿಕೊಡಬೇಕೆಂದು ಪೂಜ್ಯ ಮಹಾಪೌರರಲ್ಲಿ ಹಾಗೂ ಆಯುಕ್ತರವರಲ್ಲಿ ಮನವಿ ಸಲ್ಲಿಸಿದರು. ಅದಕ್ಕೆ ಸ್ಪಂದಿಸಿದ ಆಯುಕ್ತರು ಅಂಬೇಡ್ಕರ್ ಸಮುದಾಯ ಭವನ ಹಾಗೂ ಆಸ್ಪತ್ರೆಯನ್ನು ನಿರ್ಮಿಸಲು ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಆಡಳಿತ ಪಕ್ಷದ ನಾಯಕರಾದ ಶ್ರೀ ಬಿ.ಆರ್. ನಂಜುಂಡಪ್ಪ ಹಾಗೂ ಪಾಲಿಕೆ ಸದಸ್ಯರಾದ ಶ್ರೀ ತಿಮ್ಮರಾಜು ಮತ್ತು ಸ್ಥಳೀಯ ಗಣ್ಯವ್ಯಕ್ತಿಗಳು ಹಾಗೂ ಪಾಲಿಕೆಯ ಅಧಿಕಾರಿಗಳು ಉಪಸ್ಥಿತರಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**